# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತಾರನೆಯ ಅಧಿವೇಶನ

*ಸಂತಾಪ ಸೂಚನೆಗಳು*

**ಮಾನ್ಯ ಸಭಾಪತಿಯವರು:**

**ಕಲಬುರಗಿಯ ಶರಣ ಸಂಸ್ಥಾನದ ಏಂಟನೆಯ ಪೀಠಾಧಿಪತಿ ಡಾ: ಶರಣಬಸಪ್ಪ ಅಪ್ಪ ಹಾಗೂ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಕುಮಾರ ಚಂದ್ರಶೇಖರನಾಥ ಸ್ವಾಮೀಜಿ ಅವರುಗಳು ನಿಧನರಾದುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.**

### 1. ಡಾ: ಶರಣಬಸಪ್ಪ ಅಪ್ಪ

**ಕಲಬುರಗಿಯ ಶರಣ ಸಂಸ್ಥಾನದ ಏಂಟನೆಯ ಪೀಠಾಧಿಪತಿ ಡಾ: ಶರಣಬಸಪ್ಪ ಅಪ್ಪ ಅವರು ದಿನಾಂಕ:14.08.2025ರಂದು ನಿಧನ ಹೊಂದಿರುತ್ತಾರೆ.**

1935ರ ನವೆಂಬರ್ 14ರಂದು ಜನಿಸಿದ್ದ ಶ್ರೀಯುತರು ಬಾಲ್ಯದಲ್ಲಿಯೇ ಆಧ್ಯಾತ್ಮಿಕತೆ, ದೈವತ್ವದ ವಾತಾವರಣದ ಬೆಳದಿದ್ದ ಇವರು ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದಿಂದ ತತ್ವಶಾಸ್ತ್ರದಲ್ಲಿ ಸ್ನಾತಕೋತ್ತರ ಪದವಿಧರರಾಗಿದ್ದು ಅಧ್ಯಾತ್ಮ ವಿಷಯ ಸೇರಿದಂತೆ ಹಲವು ವಿಷಯಗಳಲ್ಲಿ ಅಪಾರ ಜ್ಞಾನವನ್ನು ಹೊಂದಿದ್ದರು. ದಾಸೋಹ ತತ್ವಕ್ಕೆ ಹೆಸರಾಗಿರುವ ಕಲಬುರಗಿಯ ಶರಣ ಸಂಸ್ಥಾನದ ಏಂಟನೆಯ ಪೀಠಾಧಿಪತಿಯಾಗಿ 1983ರಲ್ಲಿ ಪೀಠಾರೋಹಣ ಮಾಡಿದ್ದ ಶ್ರೀಯುತರು ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸಾಮಾನ್ಯ ಜನರ ನೈತಿಕ, ಆಧ್ಯಾತ್ಮಿಕ, ಧಾರ್ಮಿಕ ಮತ್ತು ಶೈಕ್ಷಣಿಕ ಗುಣವಟ್ಟವನ್ನು ಉನ್ನತೀಕರಿಸಲು ತಮ್ಮ ಜೀವಮಾನವನ್ನೆ ಮುಡುಪಿಟ್ಟಿದ್ದರು. ಇವರ ಸತತ ಪರಿಶ್ರಮದಿಂದಾಗಿ ಕಲ್ಯಾಣ ಕರ್ನಾಟಕ ಪ್ರದೇಶವು ಶಿಕ್ಷಣ ಸಂಸ್ಥೆಗಳ ಕೇಂದ್ರವಾಗಿ ಗುರುತಿಸಿಕೊಂಡಿರುತ್ತದೆ. ಶ್ರೀಯುತರು ತಮ್ಮ ಭಕ್ತರಿಗೆ ಅನ್ನದಾಸೋಹ ಮತ್ತು ಜ್ಞಾನ ದಾಸೋಹವನ್ನು ನೀಡಿದ ಕೀರ್ತಿಗೆ ಭಾಜನರಾಗಿದ್ದಾರೆ.

ಶಿಕ್ಷಣ ಕೇತ್ರಕ್ಕೆ ಅನನ್ಯ ಸೇವೆಯನ್ನು ಸಲ್ಲಿಸಿದ್ದ ಶ್ರೀಯುತರು ಸ್ಥಾಪಿಸಿರುವ ಶಿಕ್ಷಣ ಸಂಸ್ಥೆಗಳಲ್ಲಿ ಇಂದು ಸಾವಿರಾರು ವಿದ್ಯಾರ್ಥಿಗಳು ತಮ್ಮ ಶಿಕ್ಷಣವನ್ನು ಪಡೆಯುತ್ತಿದ್ದಾರಲ್ಲದೆ ಅವರುಗಳ ವೃತ್ತಿಜೀವನವನ್ನು ರೂಪಿಸುವಲ್ಲಿ ಅಪಾರವಾದ ಕೊಡುಗೆಯನ್ನು ನೀಡುತ್ತಿವೆ. ಶ್ರೀಯುತರು ಮಹಿಳಾ ಶಿಕ್ಷಣದ ಮೂಲಕ ಮಹಿಳಾ ಸಬಲೀಕರಣವನ್ನು ಕೈಗೊಂಡು ಮಹಿಳೆಯರಿಗಾಗಿ ಹಲವಾರು ಶಾಲೆ, ಕಾಲೇಜುಗಳು ಮತ್ತು ತಾಂತ್ರಿಕ ಸಂಸ್ಥೆಗಳನ್ನು ಸ್ಥಾಪಿಸಿದ್ದರು. ಕಲೆ ಮತ್ತು ಸಾಹಿತ್ಯದ ಪೋಷಕರಾಗಿದ್ದ

ಇವರು ಎಂ.ಎ. ಲಲಿತಕಲಾ ವಿಭಾಗವನ್ನು ಸ್ಥಾಪಿಸಿದ್ದರು. ಇದು ಸರ್ಕಾರದಿಂದ ಅನುದಾನ ಪಡೆಯದೆ ನಡೆಸುತ್ತಿರುವ ದಕ್ಷಿಣ ಭಾರತದ ಮೊದಲನೆಯ ಸಂಸ್ಥೆಯಾಗಿರುತ್ತದೆ.

ಶ್ರೀಯುತರು ಶರಣ ಬಸವ ವಿಶ್ವವಿದ್ಯಾಲಯದ ಕುಲಪತಿಗಳಾಗಿ, ಹೈದರಾಬಾದ್ ಶಿಕ್ಷಣ ಸಂಘದ ಅಧ್ಯಕ್ಷರಾಗಿ, ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ಸೆನೆಟ್ ಮತ್ತು ಸಿಂಡಿಕೇಟ್‌ನ ಸದಸ್ಯರಾಗಿ, ಕಲಬುರಗಿ ವಿಶ್ವವಿದ್ಯಾಲಯದ ಮೂಲಸೌಕರ್ಯ ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾಗಿ ಹಾಗೂ ಬೆಳಗಾವಿಯಲ್ಲಿ ನಡೆದ ಅಖಿಲ ಭಾರತ ವೀರಶೈವ ಸಮ್ಮೇಳನದ ಅಧ್ಯಕ್ಷರಾಗಿಯು ಸೇವೆಯನ್ನು ಸಲ್ಲಿಸಿದ್ದರು.

ಸಾಹಿತ್ಯ ಪೋಷಕರಾಗಿದ್ದ ಶ್ರೀಯುತರು ಶ್ರೇಷ್ಠ ಕವಿಯೂ ಅಗಿದ್ದರು. ವೀರಶೈವ ತತ್ವಶಾಸ್ತ್ರದ ಕುರಿತು ಅನೇಕ ವಿದ್ವತ್‌ಪೂರ್ಣ ಕೃತಿಗಳನ್ನು ರಚಿಸಿದ್ದಾರೆ. ಸಂಸ್ಕೃತ ಸಾಹಿತ್ಯದ ಬ್ರಹ್ಮಸೂತ್ರಗಳ ಮಾದರಿಯಲ್ಲಿ ದಾಸೋಹ ಸೂತ್ರಗಳನ್ನು ರಚಿಸಿದ್ದು ಇದೊಂದು ವಿಶಿಷ್ಟ ಕಾವ್ಯ ಪ್ರಕಾರವೆಂದು ಪರಿಗಣಿಸಲಾಗಿರುತ್ತದೆ. "ವಿದ್ಯಾ ಭಂಡಾರಿ" ಎಂಬ ಕೀರ್ತಿಗೆ ಭಾಜನರಾಗಿದ್ದ ಇವರು ರಾಜ್ಯೋತ್ಸವ ಪ್ರಶಸ್ತಿ, ಕಲಬುರಗಿ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪ್ರಶಸ್ತಿ, ಶ್ರೀ ಚನ್ನರೇಣುಕ ಬಸವ ಪ್ರಶಸ್ತಿಗಳಲ್ಲದೆ ಇವರು ಶಿಕ್ಷಣ, ಸಾಹಿತ್ಯ, ಸಂಸ್ಕೃತಿ ಮತ್ತು ಆಧ್ಯಾತ್ಮಿಕ ಕ್ಷೇತ್ರಗಳಿಗೆ ಸಲ್ಲಿಸಿದ ಅಪಾರ ಸೇವೆಯನ್ನು ಗುರುತಿಸಿ ಹಲವಾರು ಪ್ರತಿಷ್ಠಿತ ಸಂಸ್ಥೆಗಳ ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ.

**ಪೂಜ್ಯರ ನಿಧನದಿಂದಾಗಿ ರಾಜ್ಯವು ಮಹಾ ಮಾನವತವಾದಿ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಶೈಕ್ಷಣಿಕ ಹರಿಕಾರರೊಬ್ಬರನ್ನು ಕಳೆದುಕೊಂಡಂತಾಗಿದೆ.**

## 2. ಕುಮಾರ ಚಂದ್ರಶೇಖರನಾಥ ಸ್ವಾಮೀಜಿ

**ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಕುಮಾರ ಚಂದ್ರಶೇಖರನಾಥ ಸ್ವಾಮೀಜಿರವರು ದಿನಾಂಕ:16.08.2025ರಂದು ನಿಧನ ಹೊಂದಿರುತ್ತಾರೆ.**

1945ರ ಫೆಬ್ರವರಿ 10ರಂದು ಜನಿಸಿದ್ದ ಶ್ರೀಗಳು ಬಿ.ಕಾಂ., ಮತ್ತು ಸಿ.ಎ., ಪದವೀಧರರಾಗಿದ್ದರು. ಶ್ರೀಗಳು ಆದಿಚುಂದನಗಿರಿ ಮಠದಲ್ಲಿ ಸನ್ಯಾಸ ದೀಕ್ಷೆಯನ್ನು ಪಡೆದು ಆನಂತರ ಬೆಂಗಳೂರಿನ ತಿರುಚ್ಚಿ ಕೈಲಾಸಾಶ್ರಮದಲ್ಲಿ ಸಂಸ್ಕೃತ ವೇದ ಅಧ್ಯಯನ ಮಾಡಿದ್ದರು. ಶ್ರೀಗಳು 1983ರಲ್ಲಿ ಬೆಂಗಳೂರಿನ ಕೆಂಗೇರಿ ಬಳಿ ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನ ಮಠವನ್ನು ಸ್ಥಾಪಿಸಿದ್ದರು. ಧಾರ್ಮಿಕ, ಸಾಮಾಜಿಕ, ಶೈಕ್ಷಣಿಕ ಮುಂತಾದ ಕ್ಷೇತ್ರಗಳಲ್ಲಿ ನಿಷ್ಕಾಮ ಸೇವೆ ಸಲ್ಲಿಸುವ ಮೂಲಕ ಜನಮಾನಸದಲ್ಲಿ ಭಕ್ತಿಯನ್ನು ನೆಲೆಗೊಳಿಸುವ ಕೈಂಕರ್ಯದಲ್ಲಿ ನಿರತರಾಗಿದ್ದರು.

ವಿಶೇಷವಾಗಿ ಶಿಕ್ಷಣ ಕ್ಷೇತ್ರದಲ್ಲಿ ಹೆಚ್ಚು ಒತ್ತುಕೊಟ್ಟಿದ್ದ ಶ್ರೀಗಳು ಅನಾಥ ಮಕ್ಕಳಿಗೆ, ನಿರ್ಗತಿಕ ಮಕ್ಕಳಿಗೆ ಮತ್ತು ಗ್ರಾಮೀಣ ಪ್ರದೇಶದ ಬಡಮಕ್ಕಳಿಗೆ ಅಶ್ರಯತಾಣ ಕಲ್ಪಿಸಿ ವಿದ್ಯಾರ್ಥಿ ನಿಲಯವನ್ನು ಸ್ಥಾಪಿಸಿದ್ದರು. ರೈತರ ಮಕ್ಕಳಿಗೆ ಅಂಗ್ಲ ಮಾಧ್ಯಮ ಶಿಕ್ಷಣವನ್ನು ನೀಡಬೇಕೆಂಬ ಸಂಕಲ್ಪದಿಂದ ಸುಸಜ್ಜಿತ ಕಟ್ಟಡ ನಿರ್ಮಿಸಿ ಪ್ರಾಥಮಿಕ ಮಟ್ಟದಿಂದ ಪ್ರೌಢಶಾಲಾ ಮಟ್ಟದವರೆಗೆ ಉಚಿತ ಅಂಗ್ಲ ಶಿಕ್ಷಣವನ್ನು ಪ್ರಾರಂಭಿಸಿದ್ದರು. ಸಮಾಜದ ಮುನ್ನಡೆ ಹಾಗೂ ಅಭಿವೃದ್ಧಿಗಾಗಿ ಮಾರ್ಗದರ್ಶನ ಮಾಡುತ್ತಿದ್ದರು. ಸನಾತನ ಸಂಸ್ಕೃತಿ ಹಾಗೂ ಪರಂಪರೆಗಳ ರಕ್ಷಕರಾಗಿ ಜನತೆಯ ದು:ಖ ದುಮ್ಮಾನಗಳಿಗೆ ಸ್ಪಂದಿಸಿ ತಮ್ಮ ಬೋಧನೆ ಮೂಲಕ ಅವರ ಸಮಸ್ಯೆಗಳಿಗೆ ಪರಿಹಾರವನ್ನು ಒದಗಿಸುತ್ತಿದ್ದರು. ಸದಾ ಸಮಾಜದ ಹಿತಚಿಂತನೆಯಲ್ಲಿಯೇ ಸಾರ್ಥಕ ಬದುಕು ನಡೆಸಿ ತಮ್ಮ ಕಾಲಾನಂತರವೂ ಸಮಾಜ ಸೇವಾ ಕೈಂಕರ್ಯಗಳು ಶಾಶ್ವತವಾಗಿ ಮುಂದುವರಿಯಲೆಂದು ಹಲವು ಲೋಕೋಪಕಾರಿ ಕಾರ್ಯಗಳನ್ನು ಸಂಕಲ್ಪಿಸಿದ್ದರು.

**ಶ್ರೀಗಳ ನಿಧನದಿಂದಾಗಿ ರಾಜ್ಯವು ಅಧ್ಯಾತ್ಮಿಕ, ಧಾರ್ಮಿಕ, ಶೈಕ್ಷಣಿಕ ಕ್ಷೇತ್ರ ಹರಿಕಾರರೊಬ್ಬರನ್ನು ಕಳೆದುಕೊಂಡಂತಾಗಿದೆ.**

<u>ಸಭಾನಾಯಕರು ಹಾಗೂ ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:</u>-

**ಮೃತರುಗಳ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಅಪಾರ ಭಕ್ತವೃಂದದವರಿಗೆ ಹಾಗೂ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.**

**ಮೃತರುಗಳ ಗೌರವಾರ್ಥ ಮಾನ್ಯ ಶಾಸಕರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.**

**(ಮೌನ ಆಚರಿಸಿದ ನಂತರ)**

**ಸದನದಲ್ಲಿ ಪ್ರಸ್ತಾಪಿಸಿದ ಸಂತಾಪ ಸೂಚನೆಯನ್ನು ಮೃತ ಗಣ್ಯರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.**